**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ     ದಿನಾಂಕ : DATE : 19/4/21

# ಯಕ್ಷ ವಿದ್ವಾಂಸ ಎಂ.ಎ. ಹೆಗಡೆ ಇನ್ನಿಲ್ಲ

■ **ವಿಕ ಸುದ್ದಿಲೋಕ** ಬೆಂಗಳೂರು / ಶಿರಸಿ 19/4

ಕರ್ನಾಟಕ ಯಕ್ಷಗಾನ ಅಕಾಡೆಮಿ ಅಧ್ಯಕ್ಷ, ಖ್ಯಾತ ಯಕ್ಷಗಾನ ಪ್ರಸಂಗಕರ್ತ, ಸಾಹಿತಿ, ವಾಗ್ಮಿ ಪ್ರೊ. ಮಹಾಬಲೇಶ್ವರ ಅಣ್ಣಪ್ಪ ಹೆಗಡೆ (ಎಂ ಎ ಹೆಗಡೆ) ಅವರು ಭಾನುವಾರ ವಿಧಿವಶರಾದರು. ಯಲಹಂಕದ ಚಿತಾಗಾರದಲ್ಲಿ ಅಂತ್ಯ ಸಂಸ್ಕಾರ ನೆರವೇರಿತು.



73 ವರ್ಷದ ಹೆಗಡೆ ಅವರಿಗೆ ಏ.13ರಂದು ಕೊರೊನಾ ಸೋಂಕು ದೃಢ ಪಟ್ಟಿತ್ತು. ಆಸ್ಪತ್ರೆಗೆ ದಾಖಲಾಗಿದ್ದ ಅವರಿಗೆ ಚಿಕಿತ್ಸೆ ಬಳಿಕ ಬಳಿಕ ನೆಗೆಟಿವ್ ವರದಿ ಬಂದಿತ್ತು. ಶನಿವಾರ ಮುಂಜಾನೆ ಹೃದಯಾಘಾತದಿಂದ ಆಸ್ಪತ್ರೆಯಲ್ಲೇ ಕೊನೆಯುಸಿರೆಳೆದರು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಅವರಿಗೆ ಪತ್ನಿ, ಪುತ್ರಿ ಹಾಗೂ ಒಬ್ಬ ಪುತ್ರ ಇದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಹೆಗ್ಗರಣೆ ಸಮೀಪದ ಜೋಗಿನ ಮನೆ ಗ್ರಾಮದ ಹೆಗಡೆ, 11ನೇ ವಯಸ್ಸಿನಲ್ಲಿಯೇ ಯಕ್ಷಗಾನ ತಾಳಮದ್ದಳೆಯ ಅರ್ಥದಾರಿಯಾಗಿ ರಂಗಪ್ರವೇಶ ಮಾಡಿದ್ದರು. ಕೆರೆಮನೆ ಶಂಭು ಹೆಗಡೆ ಬಳಿ ಅಭ್ಯಾಸ ಮಾಡಿ ಬಣ್ಣ ಹಚ್ಚಿದ್ದರು. ಬಯಲಾಟ ಕಲಾವಿದ, ಪ್ರಸಂಗಕರ್ತ ರಾಗಿಯೂ ಹೆಸರು ಮಾಡಿದ್ದರು. 1973 ರಿಂದ ಸಿದ್ದಾಪುರದ ಮಹಾತ್ಮ ಗಾಂಧಿ ಶತಾಬ್ದಿ ಮಹಾವಿದ್ಯಾಲಯ ದಲ್ಲಿ ಪ್ರಾಧ್ಯಾಪಕರಾಗಿ, ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ 2006ರಲ್ಲಿ ನಿವೃತ್ತಿ ಹೊಂದಿದ್ದರು. ಎರಡು ಬಾರಿ ಯಕ್ಷಗಾನ ಅಕಾಡೆಮಿ ಅಧ್ಯಕ್ಷರಾಗಿದ್ದರು. ಯಕ್ಷಗಾನ ಕಲೆ ಹಾಗೂ ಕಲಾವಿದರ ಬದುಕಿನ ಅಭಿವೃದ್ಧಿಗಾಗಿ ಶ್ರಮಿಸಿದ್ದರು.

**ಗಣ್ಯರಿಂದ ಸಂತಾಪ:** ಎಂ ಎ ಹೆಗಡೆ ಅವರ ನಿಧನಕ್ಕೆ ಸ್ವರ್ಣವಲ್ಲಿ ಮಹಾಸಂಸ್ಥಾನದ ಶ್ರೀ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ, ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಸಚಿವರಾದ ಅರವಿಂದ ಲಿಂಬಾವಳಿ, ಶಿವರಾಮ ಹೆಬ್ಬಾರ, ಸಂಸದ ಅನಂತ್ ಕುಮಾರ್, ಬಿಜೆಪಿ ಪ್ರಮುಖ ಸಿ ಟಿ ರವಿ, ಟಿ ಎಸ್ ನಾಗಾಭರಣ, ಕೆರೆಮನೆ ಶಿವಾನಂದ ಹೆಗಡೆ ಮತ್ತಿತರರು ಸಂತಾಪ ವ್ಯಕ್ತಪಡಿಸಿದ್ದಾರೆ.

● ಯಕ್ಷಗಾನವನ್ನು ಇನ್ನಷ್ಟು ಜನಪ್ರಿಯಗೊಳಿಸಲು ಶ್ರಮಿಸಿದ್ದ ಎಂ ಎ ಹೆಗಡೆ ಅವರ ಆತ್ಮಕ್ಕೆ ಭಗವಂತ ಸದ್ಗತಿ ನೀಡಲಿ.

**- ಬಿ.ಎಸ್.ಯಡಿಯೂರಪ್ಪ**
ಸಿಎಂ